ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 15/4/2021

## ಸುದ್ದಿ ಮಿಂಚು

### ಶಾಸಕರಿಗೆ ಕೊರೊನಾ ಸೋಂಕು

15/4/21

ಸಂ.ಕ. ಸಮಾಚಾರ ಮೈಸೂರು

ಮೈಸೂರಿನ ಕೃಷ್ಣರಾಜ ಕ್ಷೇತ್ರದ ಶಾಸಕ ಎಸ್.ಎ. ರಾಮದಾಸ್ ಅವರಿಗೆ ಕೊರೊನಾ ಸೋಂಕು ದೃಢಪಟ್ಟಿದೆ. ನಗರದಲ್ಲಿ ಬುಧವಾರ ಪಾಲ್ಗೊಂಡಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಜೊತೆಗಿದ್ದ ಇತರೆ ಗಣ್ಯರಲ್ಲಿ ಆತಂಕವುಂಟಾಗಿದೆ. ಕಳೆದ ಕೆಲ ದಿನಗಳಿಂದ ರಾಮದಾಸ್ ಅವರು ತುಸು ಅನಾರೋಗ್ಯಕ್ಕೊಳಗಾಗಿದ್ದರು. ಸೋಂಕು ಲಕ್ಷಣಗಳನ್ನು ಲಘುವಾಗಿ ಹೊಂದಿದ್ದ ಕಾರಣದಿಂದ ತಪಾಸಣೆಗೆ ಒಳಗಾಗಿದ್ದರು. ಆದರೆ ಇದರ ವರದಿ ಅವರು ಸಮಾರಂಭದಲ್ಲಿ ಪಾಲ್ಗೊಂಡು ವಾಪಸಾದ ಬಳಿಕ ದೊರೆತಿದ್ದು, ಇಲ್ಲಿ ಸೋಂಕು ತಗುಲಿರುವುದು ದೃಢಪಟ್ಟಿದೆ. ಇನ್ನು, ಶಾಸಕ ರಾಮದಾಸ್ ಅವರು ಭಾಗಿಯಾಗಿದ್ದ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ ಸೋಮಶೇಖರ್, ಶಾಸಕ ಎಲ್. ನಾಗೇಂದ್ರ, ಮುಡಾ ಅಧ್ಯಕ್ಷ ರಾಜೀವ್, ಸಂಸದ ಪ್ರತಾಪ್ ಸಿಂಹ, ಮೇಯರ್ ರುಕ್ಮಿಣಿ ಮಾದೇಗೌಡ, ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ ಇನ್ನಿತರರು ಭಾಗಿಯಾಗಿದ್ದರು. ಇವರೆಲ್ಲರೂ ಈಗ ಆತಂಕಕ್ಕೆ ಒಳಗಾಗುವ ಪರಿಸ್ಥಿತಿ ನಿರ್ಮಾಣವಾಗಿದೆ.

